Akashvani : Bangalore
Regional Bulletin In Kannada
17.02.2026 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕೋಲಾರದ ವೇಮಗಲ್‌ನಲ್ಲಿಂದು ಏರ್‌ಬಸ್ ಎಚ್-೧೨೫ ಹೆಲಿಕಾಪ್ಟರ್ ಘಟಕಕ್ಕೆ ಪ್ರಧಾನಿ - ಫ್ರಾನ್ಸ್ ಅಧ್ಯಕ್ಷರಿಂದ ವರ್ಚುವಲ್ ಮೂಲಕ ಚಾಲನೆ
- ರೈತ ಮುಖಂಡರು, ಕೃಷಿ ಸಂಸ್ಥೆಗಳ ಪ್ರತಿನಿಧಿಗಳ ಜೊತೆ ಬಜೆಟ್ ಪೂರ್ವ ಸಭೆ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
- ಚಿಕ್ಕಮಗಳೂರು ಕಲ್ಲು ತೂರಾಟ ಪ್ರಕರಣ; ಆರೋಪಿಗಳ ವಿರುದ್ಧ ಕಠಿಣ ಕ್ರಮ- ಗೃಹ ಸಚಿವ ಡಾ.ಜಿ.ಪರಮೇಶ್ವರ್
- ಬೆಂಗಳೂರಿನ ನಾಯಂಡಹಳ್ಳಿಯಲ್ಲಿ ನೂತನ ರಸ್ತೆ ಮೇಲ್ಸೇತುವೆ ಲೋಕಾರ್ಪಣೆಗೊಳಿಸಿದ ಕೇಂದ್ರ ಸಚಿವ ವಿ.ಸೋಮಣ್ಣ
- ರಣಜಿ ಟ್ರೋಫಿ ಸೆಮಿಫೈನಲ್ ಹಣಾಹಣಿ; ಉತ್ತರಾಖಂಡ್‌ಗೆ ೭೩೭ ರನ್‌ಗಳ ಬೃಹತ್ ಗೆಲುವಿನ ಗುರಿ ನೀಡಿದ ಕರ್ನಾಟಕ

<><*<><>*><>

ಕೋಲಾರ ತಾಲೂಕಿನ ವೇಮಗಲ್ ಕೈಗಾರಿಕಾ ಪ್ರದೇಶದಲ್ಲಿ ಟಾಟಾ ಅಡ್ವಾನ್ಸಡ್ ಸಿಸ್ಟಮ್ಸ್ ಲಿಮಿಟೆಡ್‌ನ ಏರ್‌ಬಸ್ ಎಚ್-೧೨೫ ಹೆಲಿಕಾಪ್ಟರ್‌ನ ಅಂತಿಮ ಜೋಡಣಾ ಘಟಕವನ್ನು ಇಂದು ಪ್ರಧಾನಿ ನರೇಂದ್ರ ಮೋದಿ ಹಾಗೂ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ವರ್ಚುವಲ್ ಮೂಲಕ ಲೋಕಾರ್ಪಣೆಗೊಳಿಸಲಿದ್ದಾರೆ. ಈ ವೇಳೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಉಪಸ್ಥಿತರಿರಲಿದ್ದಾರೆ. ವೇಮಗಲ್‌ನ ಕುರಗಲ್ ಕೈಗಾರಿಕಾ ಪ್ರದೇಶದಲ್ಲಿ ಸುಮಾರು ೫೦ ಎಕರೆ ಪ್ರದೇಶದಲ್ಲಿ ನಿರ್ಮಾಣಗೊಂಡಿರುವ ಈ ಘಟಕ ದೇಶದಲ್ಲೇ ಮೊದಲ ಮಿನಿ ನಾಗರಿಕ ಹೆಲಿಕಾಪ್ಟರ್ ಘಟಕ ಎಂಬ ಹೆಗ್ಗಳಿಕೆಗೆ ಪಾತ್ರವಾಗಲಿದೆ. ಮೊದಲ ವರ್ಷದಲ್ಲಿ ಎಚ್-೧೨೫ ಮಾದರಿಯ ೧೦ ಹೆಲಿಕಾಪ್ಟರ್‌ಗಳನ್ನು ತಯಾರಿಸುವ ಗುರಿ ಹೊಂದಲಾಗಿದೆ. ಈ ಹೆಲಿಕಾಪ್ಟರ್ ಗಳು ತುರ್ತು ವೈದ್ಯಕೀಯ ಸೇವೆ, ಪ್ರವಾಸೋದ್ಯಮ, ರಕ್ಷಣಾ ಕಾರ್ಯಾಚರಣೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಬಳಕೆಯಾಗಲಿದೆ. ಈ ಘಟಕಕ್ಕೆ ಮುಂದಿನ ಹಂತಗಳಲ್ಲಿ ಉತ್ಪಾದನಾ ಸಾಮರ್ಥ್ಯ ಹೆಚ್ಚಿಸುವ ಯೋಜನೆ ಹೊಂದಿದೆ.

<><*<><>*><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಾಗೂ ಫ್ರಾನ್ಸ್ ರಕ್ಷಣಾ ಸಚಿವ ಕ್ಯಾಥರಿನ್ ವ್ಯಾಟ್ರಿನ್ ಬೆಂಗಳೂರಿನಲ್ಲಿಂದು ಆರನೇ ಭಾರತ-ಫ್ರಾನ್ಸ್ ರಕ್ಷಣಾ ಸಂವಾದ ನಡೆಸಲಿದ್ದಾರೆ. ಈ ವೇಳೆ, ಉಭಯ

ನಾಯಕರು, ರಕ್ಷಣಾ ಸಹಕಾರ ಹಾಗೂ ಕೈಗಾರಿಕಾ ಸಹಯೋಗ ವಿಸ್ತರಣೆ ಕುರಿತಂತೆ ಮಾತುಕತೆ ನಡೆಸಲಿದ್ದಾರೆ. ಇದೇ ವೇಳೆ, ಉಭಯ ದೇಶಗಳ ರಕ್ಷಣಾ ಸಹಕಾರ ಒಪ್ಪಂದವನ್ನು ಹತ್ತು ವರ್ಷಗಳವರೆಗೆ ನವೀಕರಿಸುವ ಸಾಧ್ಯತೆಯಿದೆ. ಹ್ಯಾಮರ್ ಕ್ಷಿಪಣಿಗಳ ತಯಾರಿಕಾ ಒಪ್ಪಂದಕ್ಕೆ ಉಭಯ ನಾಯಕರು ಸಹಿ ಹಾಕುವ ನಿರೀಕ್ಷೆಯಿದೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಇಂದು ರೈತ ಸಂಘಟನೆಗಳ ಮುಖಂಡರು ಮತ್ತು ಕೃಷಿ ಸಂಸ್ಥೆಗಳ ಪ್ರತಿನಿಧಿಗಳ ಜೊತೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ೨೦೨೬-೨೭ನೇ ಸಾಲಿನ ಆಯವ್ಯಯ ಪೂರ್ವಭಾವಿ ಸಭೆ ನಡೆಸಿ ಚರ್ಚಿಸಿದರು. ಈ ವೇಳೆ, ಸಚಿವರಾದ ಚಲುವರಾಯಸ್ವಾಮಿ, ವೆಂಕಟೇಶ್, ನೀತಿ ಆಯೋಗದ ಉಪಾಧ್ಯಕ್ಷರಾದ ಬಿ.ಆರ್.ಪಾಟೀಲ್, ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ, ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು. ಸಂಜೆ ಅವರು, ಆರ್ಥಿಕ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಲಿದ್ದಾರೆ. ಬಳಿಕ, ಅಲ್ಪಸಂಖ್ಯಾತ ಸಮುದಾಯದ ಸಚಿವರು ಹಾಗೂ ಶಾಸಕರೊಂದಿಗೆ ಆಯವ್ಯಯ ಪೂರ್ವಭಾವಿ ಸಮಾಲೋಚನೆ ನಡೆಸಲಿದ್ದಾರೆ.

<><*<><>*><>

ಚಿಕ್ಕಮಗಳೂರಿನಲ್ಲಿ ಮನೆಯೊಂದರ ಮೇಲೆ ನಡೆದ ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಸೂಕ್ತ ಕ್ರಮ ಕೈಗೊಳ್ಳಲಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೊಲೀಸರಿಗೆ ಸಂಪೂರ್ಣ ಸ್ವಾತಂತ್ರ್ಯ ನೀಡಲಾಗಿದ್ದು, ಆರೋಪಿಗಳ ವಿರುದ್ಧ ಕಾನೂನಾತ್ಮಕ ಕ್ರಮಕ್ಕೆ ಸೂಚಿಸಲಾಗಿದೆ ಎಂದು ಹೇಳಿದ್ದಾರೆ. ಇದೇ ವೇಳೆ, ಕಾಂಗ್ರೆಸ್ ಶಾಸಕರ ವಿದೇಶ ಪ್ರವಾಸ ಕುರಿತಂತೆ ಪ್ರತಿಕ್ರಿಯಿಸಿರುವ ಅವರು, ಸ್ವಂತ ಖರ್ಚಿನಲ್ಲಿ ಎಲ್ಲಿ ಬೇಕಾದರೂ ಹೋಗಬಹುದು ಎಂದು ತಿಳಿಸಿದ್ದಾರೆ. ಇನ್ನೊಂದೆಡೆ ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿರುವ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ, ಕಾಂಗ್ರೆಸ್ ಶಾಸಕರ ವಿದೇಶ ಪ್ರವಾಸಕ್ಕೆ ಯಾರ ಅನುಮತಿಯೂ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಬೆಂಗಳೂರಿನ ವಿಜಯನಗರ-ಮೈಸೂರು ರಸ್ತೆಯ ನಾಯಂಡಹಳ್ಳಿ ಬಳಿ ನೂತನ ರಸ್ತೆ ಮೇಲ್ಸೇತುವೆಯನ್ನು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಇಂದು ಲೋಕಾರ್ಪಣೆಗೊಳಿಸಿದರು. ಈ ರಸ್ತೆ ಮೇಲ್ಸೇತುವೆ ಈ ಭಾಗದ ಜನರ ಬಹುದಿನದ ಬೇಡಿಕೆಯಾಗಿತ್ತು. ನೂತನ ಮೇಲ್ಸೇತುವೆಯು ವಿಜಯನಗರ ಹಾಗೂ ಪಾದರಾಯನಪುರದ ಜನತೆಗೆ ಸಹಕಾರಿಯಾಗಲಿದೆ ಎಂದು ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಸಚಿವ ಜಮೀರ್ ಅಹ್ಮದ್ ಖಾನ್, ಸಂಸದ ಪಿ.ಸಿ ಮೋಹನ್, ರಾಜ್ಯಸಭಾ ಸದಸ್ಯ ಲೆಹರ್ ಸಿಂಗ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ವಿವಿಧೆಡೆ ಇಂದು ಎಂಡೋಸಲ್ಫಾನ್ ಸಂತ್ರಸ್ತರಿಗಾಗಿ ಆರೋಗ್ಯ ತಪಾಸಣಾ ವಿಶೇಷ ಶಿಬಿರಗಳನ್ನು ಆಯೋಜಿಸಲಾಗಿದೆ. ಬೆಳ್ತಂಗಡಿಯ ಕಣಿಯೂರು, ಪುತ್ತೂರು ತಾಲೂಕಿನ ಕೊಯಿ, ಉಪ್ಪಿನಂಗಡಿ, ಸುಳ್ಯ ತಾಲೂಕಿನ ಬೆಳ್ಳಾರೆಯಲ್ಲಿ ವಿಶೇಷ ಶಿಬಿರ ನಡೆಯುತ್ತಿದೆ. ನಾಳೆ ಬೆಳ್ತಂಗಡಿ ತಾಲೂಕಿನ ಕೊಕ್ಕಡ ಹಾಗೂ ಇದೇ ೧೧ ರಂದು ಪುತ್ತೂರು ತಾಲೂಕಿನ ಪಾಣಾಜೆ ಆರೋಗ್ಯ ಕೇಂದ್ರಗಳಲ್ಲಿ ಶಿಬಿರ ಏರ್ಪಡಿಸಲಾಗಿದೆ. ಈ ಶಿಬಿರದ ಸದುಪಯೋಗವನ್ನು ಎಂಡೋಸಲ್ಫಾನ್ ಸಂತ್ರಸ್ತರು ಪಡೆದುಕೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ನಿಧಿಯನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸದಂತೆ ಬಿಜೆಪಿ ಸಲಹೆ ನೀಡಿದೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಪ್ರತಿಪಕ್ಷ ನಾಯಕ ಆರ್.ಅಶೋಕ, ಈ ಬಾರಿಯ ಆಯವ್ಯಯದಲ್ಲಿ ಪರಿಶಿಷ್ಟರ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸುವುದಿಲ್ಲ ಎಂಬುದಾಗಿ ಸ್ಪಷ್ಟಪಡಿಸಲಿ ಎಂದು ಸವಾಲು ಹಾಕಿದ್ದಾರೆ. ಇದೇ ವೇಳೆ, ರಾಜ್ಯ ಆರ್ಥಿಕ ಸ್ಥಿತಿಯ ಕುರಿತು ಶ್ವೇತಪ್ರತ ಬಿಡುಗಡೆ ಮಾಡುವಂತೆ ಆಗ್ರಹಿಸಿದ್ದಾರೆ. ಪರಿಶಿಷ್ಟರ ಹಣವನ್ನು ಇತರ ಯೋಜನೆಗಳಿಗೆ ಬಳಸಿಕೊಳ್ಳುತ್ತಿರುವ ಸರ್ಕಾರ ಸಾಮಾಜಿಕ ನ್ಯಾಯ ನೀಡಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಫ್ರೆಂಚ್ ಬಹುರಾಷ್ಟ್ರೀಯ ಏರೋಸ್ಪೇಸ್ ಮತ್ತು ರಕ್ಷಣಾ ತಂತ್ರಜ್ಞಾನ ನಾಯಕನಾಗಿರುವ ಥೇಲ್ಸ್, ಏಳು ದಶಕಗಳಿಗೂ ಹೆಚ್ಚು ಸಮಯದಿಂದ ಭಾರತದ ವಿಶ್ವಾಸಾರ್ಹ ಪಾಲುದಾರನಾಗಿದೆ ಎಂದು ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಥೇಲ್ಸ್ ಗ್ರೂಪ್ ಕಂಪನಿಯ ಎಂಜಿನಿಯರಿಂಗ್ ಸಾಮರ್ಥ್ಯ ಕೇಂದ್ರದಲ್ಲಿ ಥೇಲ್ಸ್ ಸಂಶೋಧನೆ ಮತ್ತು ತಂತ್ರಜ್ಞಾನ ಪ್ರಯೋಗಾಲಯ ಉದ್ಘಾಟಿಸಿ ಮಾತನಾಡಿದ ಅವರು, ಇದು ಭಾರತದಲ್ಲಿ ಥೇಲ್ಸ್ ಗ್ರೂಪ್‌ನ ಬೆಳೆಯುತ್ತಿರುವ ಸಂಶೋಧನೆ ಮತ್ತು ಅಭಿವೃದ್ಧಿ ಹೆಜ್ಜೆಯ ಹೆಗ್ಗುರುತಾಗಿದೆ ಎಂದು ಹೇಳಿದ್ದಾರೆ. ಈ ಹೊಸ ಸಂಶೋಧನಾ ಕೇಂದ್ರವು, ಮಾನವ-ಕೇಂದ್ರಿತ ಕೃತಕಬುದ್ಧಿಮತ್ತೆ ಕ್ವಾಂಟಮ್ ಕಂಪ್ಯೂಟಿಂಗ್, ಎಡ್ಜ್ ಕಂಪ್ಯೂಟಿಂಗ್, ಭವಿಷ್ಯದ ಸಂಪರ್ಕ ಹಾಗೂ ಮುಕ್ತ ನಾವೀನ್ಯತೆ ಮುಂತಾದ ಅತ್ಯಾಧುನಿಕ ಕ್ಷೇತ್ರಗಳ ಮೇಲೆ ಕೇಂದ್ರೀಕರಿಸುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇರುವವರೆಗೂ ಗ್ಯಾರಂಟಿ ಯೋಜನೆಗಳು ಮುಂದುವರಿಯಲಿವೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಹೇಳಿದ್ದಾರೆ. ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಯೋಜನೆಯ ೭ ಕೋಟಿ ರೂಪಾಯಿ ವೆಚ್ಚದ ವಿವಿಧ ಕಾಮಗಾರಿಗಳಿಗೆ ಅಡಿಗಲ್ಲು ನೆರವೇರಿಸಿ ಮಾತನಾಡಿದ ಅವರು, ಅನ್ನಭಾಗ್ಯ ಯೋಜನೆಯಡಿ ಅಕ್ಕಿ ನೀಡಲು ಕೇಂದ್ರ ಸರ್ಕಾರ

ಸಹಕರಿಸದಿದ್ದರೂ, ರಾಜ್ಯ ಸರ್ಕಾರ ಡಿಬಿಟಿ ಮೂಲಕ ಹಣ ಜಮಾ ಮಾಡುತ್ತಿದೆ. ಸದ್ಯದಲ್ಲೇ ಅಕ್ಕಿಯ ಬದಲಾಗಿ ಬೇಳೆ, ಸಕ್ಕರೆ, ಉಪ್ಪು ಹಾಗೂ ಎಣ್ಣೆ ಒಳಗೊಂಡ 'ಇಂದಿರಾ ಕಿಟ್' ನೀಡುವ ಬಗ್ಗೆ ಸಚಿವ ಸಂಪುಟದಲ್ಲಿ ಚರ್ಚೆ ನಡೆದಿದ್ದು, ಶೀಘ್ರವೇ ಜಾರಿಗೆ ಬರಲಿದೆ ಎಂದು ತಿಳಿಸಿದ್ದಾರೆ.

<><*<><>*><>

ದಾವಣಗೆರೆ ಜಿಲ್ಲೆಯ ನಿರುದ್ಯೋಗಿ ಯುವಜನತೆಗೆ ಸ್ಥಳೀಯವಾಗಿ ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಇದೇ ಫೆಬ್ರವರಿ ೧೩ ರಂದು ಬೃಹತ್ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಈಗಾಗಲೇ ೪೫ಕ್ಕೂ ಹೆಚ್ಚು ಕಂಪನಿಗಳು ನೋಂದಾಯಿಸಿಕೊಂಡಿದ್ದು, ಒಟ್ಟು ೭೦ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸುವ ಸಾಧ್ಯತೆಯಿದೆ, ಐಟಿ ವಲಯ, ಬ್ಯಾಂಕಿಂಗ್, ಮಾರ್ಕೆಟಿಂಗ್ ಮ್ಯಾನೇಜ್‌ಮೆಂಟ್, ಫಾರ್ಮಾಸ್ಯುಟಿಕಲ್ ಸೇರಿದಂತೆ ವಿವಿಧ ಕ್ಷೇತ್ರಗಳ ಕಂಪನಿಗಳು ಪಾಲ್ಗೊಳ್ಳಲಿವೆ  ಎಂದು ಮಾಹಿತಿ ನೀಡಿದ್ದಾರೆ. ಮೇಳದಲ್ಲಿ ಸುಮಾರು ೪ ಸಾವಿರ ವಿದ್ಯಾರ್ಥಿಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದು ಅವರು ಹೇಳಿದ್ದಾರೆ.

<><*<><>*><>

ಲಖನೋದ ಏಕಾನ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿ ಕ್ರಿಕೆಟ್‌ನ ಸೆಮಿಫೈನಲ್ ಪಂದ್ಯದಲ್ಲಿ ಕರ್ನಾಟಕ ತಂಡ ಬೃಹತ್ ಮೊತ್ತ ದಾಖಲಿಸಿದೆ. ಮೊದಲ ಇನ್ನಿಂಗ್ಸ್‌ನಲ್ಲಿ ೬೩೯ ರನ್‌ಗಳಿಸುವ ಮೂಲಕ ರಣಜಿ ಟೂರ್ನಿ ಇತಿಹಾಸದಲ್ಲಿ ಕರ್ನಾಟಕ ತಂಡ ಕಲೆಹಾಕಿದ ಎರಡನೇ ಗರಿಷ್ಠ ಸ್ಕೋರ್ ಆಗಿದೆ. ಮೂರನೇ ದಿನದಾಟದಲ್ಲಿ ಕರ್ನಾಟಕ ನೀಡಿರುವ ೬೩೬ ಬೃಹತ್ ರನ್‌ಗಳ ಗುರಿ ಬೆನ್ನತ್ತಿರುವ ಉತ್ತರಾಖಂಡ್ ಇತ್ತೀಚಿನ ವರದಿ ಬಂದಾಗ ೩ ವಿಕೆಟ್ ನಷ್ಟಕ್ಕೆ ೮೧ ರನ್ ಗಳಿಸಿ ಆಡುತ್ತಿದೆ. ಇನ್ನೂ ಎರಡು ದಿನಗಳ ಆಟ ಬಾಕಿಯಿದ್ದು, ಕರ್ನಾಟಕ ತಂಡ, ಉತ್ತರಾಖಂಡ್ ತಂಡವನ್ನು ಅಲೌಟ್ ಮಾಡಿದರೆ ಮಾತ್ರ ಫೈನಲ್‌ಗೆ ಪ್ರವೇಶಸಲಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೭.೪೦ ಕ್ಕೆ <>*><>